ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಸುರತ್ಕಲ್ ರೈಲು ನಿಲ್ದಾಣದ ಪಾರ್ಕಿಂಗ್ ಸಮಸ್ಯೆ

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

400 (216) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಸುರತ್ಕಲ್ ರೈಲು ನಿಲ್ದಾಣದಲ್ಲಿ ಪಾರ್ಕಿಂಗ್ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಈ ರೈಲು ನಿಲ್ದಾಣಕ್ಕೆ ಆಗಮಿಸುವ ಅಥವಾ ರೈಲು ನಿಲ್ದಾಣದಲ್ಲಿ ವಾಹನ ನಿಲುಗಡೆಗೊಳಿಸಿ ದೂರದ ಸ್ಥಳಗಳಿಗೆ ಪ್ರಯಾಣಿಸುವ ಪ್ರಯಾಣಿಕರು ರೈಲು ನಿಲ್ದಾಣದಿಂದ ನಗರಪಾಲಿಕೆ ನಿರ್ಮಿಸಿದ ರಸ್ತೆಗೆ ಅಡ್ಡಲಾಗಿ ವಾಹನಗಳನ್ನು ನಿಲ್ಲಿಸುತ್ತಿರುವುದರಿಂದ ಕಾನೂನು ಸುವ್ಯವಸ್ಥೆಯ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ರೈಲು ನಿಲ್ದಾಣದಲ್ಲಿ ರಿಕ್ಷಾ, ಟ್ಯಾಕ್ಸಿ ಮತ್ತು ದ್ವಿಚಕ್ರ ವಾಹನಗಳಿಗೆ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಬಗ್ಗೆ ಮತ್ತು ರೈಲು ನಿಲ್ದಾಣವನ್ನು ಸಂಪರ್ಕಿಸುವ ರಸ್ತೆಯ ಇಕ್ಕೆಲಗಳಲ್ಲಿ ಸೇವೆ ಬಳಸುವ ಲಾರಿಗಳು ನಿಲ್ಲುತ್ತಿರುವುದರಿಂದ ರೈಲು ಪ್ರಯಾಣಿಕರಿಗೆ ಆಗುತ್ತಿರುವ ಸಮಸ್ಯೆಯನ್ನು ಪರಿಹರಿಸಲು ಕೈಗೊಂಡ ಕ್ರಮಗಳೇನು ?